# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 127 (130) |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ), |
| ಉತ್ತರಿಸುವ ದಿನಾಂಕ | : | 19/12/2022. |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ:01/04/2006ರ ಪೂರ್ವದಲ್ಲಿ ನೇಮಕವಾಗಿ ನಂತರ ಅನುದಾನಕ್ಕೆ ಒಳಪಟ್ಟ ನೌಕರರ ಅನುದಾನಕ್ಕೂ ಪೂರ್ವದ ಸೇವೆಯನ್ನು ಪಿಂಚಣಿಗೆ ಪರಿಗಣಿಸಿ ಹಳೆಯ ನಿಶ್ಚಿತ ಪಿಂಚಣಿಯನ್ನು ನೀಡುವುದ ಕುರಿತು ಸರ್ಕಾರದ ನಿಲುವೇನು; | ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ 2006 ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01/04/2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ. |
| ಆ) | ಸರ್ಕಾರಿ ಮತ್ತು ಅನುದಾನಿತ ನೌಕರರ ಮಧ್ಯ ಯಾವುದೇ ತಾರತಮ್ಯ ಮಾಡದೇ ಆರೋಗ್ಯ ಸೌಲಭ್ಯಗಳನ್ನು ನೀಡುವ ಬಗ್ಗೆ ಸರ್ಕಾರ ಚಿಂತಿಸಿದೆಯೇ: ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು-1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.<br><br>ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು-1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯ ನೀಡಲು ಅವಕಾಶವಿರುವುದಿಲ್ಲ. ಆದುದರಿಂದ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ. |

ಸಂಖ್ಯೆ: ಇಪಿ 616 ಎಸ್ಇಎಸ್ 2022

**(ಬಿ.ಸಿ.ನಾಗೇಶ್)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಹಾಗೂ ಸಕಾಲ ಸಚಿವರು